**ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಂದುವರಿದ ಮುಖ್ಯ ವಿಚಾರಣೆಃ- ಶ್ರೀ ಬಿ ಎಂ ಆರ್ ವಕೀಲರಿಂದ 2 ನೇ ಎದುರುದಾರರ ಪರವಾಗಿ**

6. ನಾನು ಈ ದಿನ ನನ್ನ ಮುಖ್ಯ ವಿಚಾರಣೆ ಪ್ರಮಾಣಪತ್ರವನ್ನು ಸಲ್ಲಿಸಿದ್ದು, ಅದರಲ್ಲಿ ಬರೆದಿರು ಸಂಗತಿಗಳು ನಿಜ ಇದ್ದು, ನಾನೇ ಹೇಳಿ ಬರೆಸಿದ್ದು, ಅದರಲ್ಲಿನ ಪ್ರಮಾಣಕರ್ತನ ಸಹಿಗಳು ನನ್ನದೇ ಇರುತ್ತವೆ. ಅಧಿಕಾರ ಪತ್ರ ಮತ್ತು ವಿಮೆಯ ನಕಲನ್ನು ನಿ.ಆರ್ 1 ಮತ್ತು 2 ಎಂದು ಗುರುತಿಸಲಾಯಿತು.

7. ಅರ್ಜಿಯನ್ನು ವಜಾ ಮಾಡುವಂತೆ ಕೋರುತ್ತೇನೆ.

**ಪಾಟೀ ಸವಾಲುಃ- ಅರ್ಜಿದಾರರ ಪರ ಶ್ರೀ ಹೆಚ್ ಎಸ್ ವಕೀಲರಿಂದಃ**

8. ಕಾಲಮಿತಿಯಲ್ಲಿ ಅರ್ಜಿ ಸಲ್ಲಿಸಿಲ್ಲ ಎಂದು ಅರ್ಜಿಯನ್ನು ವಜಾ ಮಾಡಲು ನಾವು ಅರ್ಜಿಯನ್ನು ಸಲ್ಲಿಸಿದ್ದೇವು ಎಂದರೆ ಸರಿ. ನಮ್ಮ ಅರ್ಜಿ ವಜಾ ಆಗಿರುತ್ತದೆ ಎಂದರೆ ಸರಿ. ಚಾಲಕನಿಗೆ ಚಾಲನಾ ಪರವಾನಿಗೆ ಇರಲಿಲ್ಲ ಎಂದು ನಾನು ಯಾವುದೇ ದಾಖಲಾತಿಯನ್ನು ನೋಡಿರುವುದಿಲ್ಲ. ಓಮಿನಿ ವಾಹನದ ಚಾಲಕನ ತಪ್ಪಿನಿಂದ ಅಪಘಾತವಾಗಿರುತ್ತದೆ ಎಂದು ದೋಷಾರೋಪಣಾ ಪಟ್ಟಿಯನ್ನು ಸಲ್ಲಿಸಲಾಗಿದೆ ಎಂದರೆ ಸರಿ. ಪರಿಹಾರ ಕೊಡಲು ತಪ್ಪಿಸಿಕೊಳ್ಳಲು ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಮರುವಿಚಾರಣೆ ಇಲ್ಲ.

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನಕ್ಕೆ ತಕ್ಕಂತೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ.ಕೇ. ಸರಿ. ಇದೆ.

2 ನೇ ಅಪರ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಚಿತ್ರದುರ್ಗ